# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 395 |
| ಸದಸ್ಯರ ಹೆಸರು | : ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 10.12.2025 |
| ಉತ್ತರಿಸುವ ಸಚಿವರು | : ಕಂದಾಯ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿವಿಧ ಭಾಗಗಳಲ್ಲಿ ಸಾರ್ವಜನಿಕರು ತಮ್ಮ ಧಾರ್ಮಿಕ ಸ್ವಾತಂತ್ರ್ಯ ಮತ್ತು ಆಚರಣೆಯ ಭಾಗವಾಗಿ ಸರ್ಕಾರಿ ಜಮೀನುಗಳಲ್ಲಿ ದೇವಸ್ಥಾನ, ಮಠ-ಮಂದಿರ, ಭಜನಾ ಮಂದಿರ ಮುಂತಾದ ಧಾರ್ಮಿಕ ಶ್ರದ್ಧಾ ಕೇಂದ್ರಗಳನ್ನು ಮತ್ತು ಸಾಂಸ್ಕೃತಿಕ ಕೇಂದ್ರಗಳನ್ನು ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸದರಿ ಧಾರ್ಮಿಕ ಶ್ರದ್ಧಾ ಕೇಂದ್ರಗಳು, ಭೂ ಮಂಜೂರಾತಿಗೊಳಿಸುವಂತೆ ಸರ್ಕಾರಕ್ಕೆ ಅರ್ಜಿ ಸಲ್ಲಿಸಿವೆಯೇ; ಸಲ್ಲಿಸಿದ್ದಲ್ಲಿ, 2023-24 ರಿಂದ ಸಲ್ಲಿಕೆಯಾದ ಅರ್ಜಿಗಳು ಎಷ್ಟು; ಭೂ ಮಂಜೂರಾತಿ ಮಾಡಿದ್ದಲ್ಲಿ, ವಿವರ ನೀಡುವುದು; | 2023-24ನೇ ಸಾಲಿನಿಂದ ಇಲ್ಲಿಯವರೆಗೆ ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆಯಲ್ಲಿ ಧಾರ್ಮಿಕ ಶ್ರದ್ಧಾ ಕೇಂದ್ರಗಳು, ಭೂ ಮಂಜೂರಾತಿ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ವಿವರವನ್ನು ಈ ಕೆಳಕಂಡಂತೆ ನೀಡಲಾಗಿದೆ. |
| ಇ) | ಸದರಿ ಶ್ರದ್ಧಾ ಕೇಂದ್ರಗಳಿಗೆ ಕರ್ನಾಟಕ ಭೂ ಕಂದಾಯ ಅಧಿನಿಯಮದಡಿ ಭೂ ಮಂಜೂರಾತಿ ಮಾಡಲು ಸರ್ಕಾರಕ್ಕೆ ಅವಕಾಶವಿದ್ದರೂ ಸರ್ಕಾರ ಈ ಬಗ್ಗೆ ಈವರೆಗೂ ಕ್ರಮವಹಿಸದೇ ಇರುವದಕ್ಕೆ ಕಾರಣವೇನು; ಧಾರ್ಮಿಕ ಶ್ರದ್ಧಾ ಕೇಂದ್ರಗಳಿಗೆ ಭೂ ಮಂಜೂರಾತಿ ಮಾಡಿದ್ದಲ್ಲಿ, ಭಾರತದ ಸಂವಿಧಾನದಲ್ಲಿ ನಾಗರೀಕರಿಗೆ ಪ್ರದತ್ತವಾದ ಧಾರ್ಮಿಕ ಸ್ವಾತಂತ್ರ್ಯದ ಹಕ್ಕನ್ನು ಅನುಭವಿಸಲು ಪ್ರೋತ್ಸಾಹಿಸಿದಂತೆ ಆಗುವುದಿಲ್ಲವೇ: ಈ ಬಗ್ಗೆ ಸರ್ಕಾರದ ಅಭಿಪ್ರಾಯವೇನು; | ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 21ರಲ್ಲಿ ಮತೀಯ ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಜಮೀನು ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. |

| ಜಿಲ್ಲೆ | ಅರ್ಜಿಗಳು | ಮಂಜೂರಾತಿ |
|---|---|---|
| ದಕ್ಷಿಣ ಕನ್ನಡ | 17 | 0 |
| ಉಡುಪಿ | 28 | 0 |
| ಒಟ್ಟು | 45 | 0 |

| | | |
|---|---|---|
| ಈ) | ಸದರಿ ಶ್ರದ್ಧಾ ಕೇಂದ್ರಗಳಿಗೆ ಮತ್ತು ಸಾಂಸ್ಕೃತಿಕ ಕೇಂದ್ರಗಳಿಗೆ ಭೂ ಮಂಜೂರಾತಿ ಮಾಡಲು ಇರುವ ಪ್ರಕ್ರಿಯೆಗಳು ಏನು; ಭೂ ಮಂಜೂರಾತಿ ಮಾಡಲು ತಹಶೀಲ್ದಾರ್ ಅಥವಾ ಸಹಾಯಕ ಆಯುಕ್ತರಿಗೆ ಅಧಿಕಾರ ಪ್ರತ್ಯಾಯೋಜಿಸಲು ತೊಡಕುಗಳು ಇವೆಯೇ? | ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 21ರನ್ವಯ ಮತೀಯ ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಜಮೀನು ಮಂಜೂರು ಮಾಡಲು ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಾಗ ಸಂಸ್ಥೆ ಕೋರಿರುವ ಜಮೀನಿನ ವಿಸ್ತೀರ್ಣ, ಉದ್ದೇಶ, ಸಂಸ್ಥೆಯ ಸದ್ಯದ ಆರ್ಥಿಕ ಪರಿಸ್ಥಿತಿ ಮತ್ತು ಭೂಮಿಯ ಲಭ್ಯತೆಯೊಂದಿಗೆ ಸಂಸ್ಥೆ ಅರ್ಜಿ ಸಲ್ಲಿಸಿದ ದಿನಾಂಕಕ್ಕೆ ಹಿಂದೆ ಐದು ವರ್ಷಗಳ ಅವಧಿಗಾಗಿ ಸಮರ್ಥಿಸುವ ದಸ್ತಾವೇಜುಗಳನ್ನು ಹಾಗೂ ಸದರಿ ಜಮೀನಿನ ಮಾರುಕಟ್ಟೆ ಮೌಲ್ಯ ಮತ್ತು ಮಾರ್ಗಸೂಚಿ ಮೌಲ್ಯಗಳ ಮಾಹಿತಿಯೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.<br><br>ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರನ್ವಯ ಸರ್ಕಾರಿ ಜಮೀನನ್ನು ಮಂಜೂರು ಮಾಡಲು ಸರ್ಕಾರಕ್ಕೆ ಅಧಿಕಾರವಿರುತ್ತದೆ. |

ಸಂಖ್ಯೆ: ಆರ್‌ಡಿ 176 ಎಲ್‌ಜಿಕ್ಯೂ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು